02 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ , ನ್ಯಾಯಾಧೀಶರವರ ನ್ಯಾಯಾಲಯ , ಚನ್ನಗಿರಿ .

ಸಿಸಿ ನಂ. **1368/2022**

| | |
|---|---|
| ಹೆಸರುಃ ಹನುಮಂತಪ್ಪ | ಚಾಸಾಃ 2 |
| ತಂದೆಯ ಹೆಸರುಃ ಹಿಟ್ಟಪ್ಪ | ಪ್ರಾಸಾ:1 |
| ವಯಸ್ಸುಃ 30 ವರ್ಷ | |
| ಉದ್ಯೋಗಃ ವ್ಯವಸಾಯ | |
| ವಾಸ ಸ್ಥಳಃ ಚೆನ್ನಾಪುರ ಗ್ರಾಮ , ಚನ್ನಗಿರಿ | |
| ಸಾಕ್ಷಿಗೆ ದಿನಾಂಕಃ 22-01-2024. ರಂದು ಪ್ರಮಾಣ ವಚನ ಬೋಧಿಸಲಾಯಿತು. | |

**ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ಆರೋಪಿ ನನಗೆ ಗೊತ್ತಿಲ್ಲ. ಈಗ ನೋಡುತ್ತಿರುವ ದಾಖಲೆಯಲ್ಲಿ ನನ್ನ ಸಹಿ ಇದೆ. ಸದರಿ ದಾಖಲೆ ಮಹಜರಾಗಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಯಾವ ವಿಚಾರವಾಗಿ ಮಾಡಿರುತ್ತೇನೆ ಎಂದು ಗೊತ್ತಿಲ್ಲ. ಅದರಲ್ಲಿ ಬರೆದ ವಿಚಾರ ನನಗೆ ಗೊತ್ತಿಲ್ಲ. ಪೊಲೀಸರ ಸೂಚನೆ ಮೇರೆಗೆ ನಾನು ಕೊಂಡದಹಳ್ಳಿಯ ಸರ್ಕಾರಿ ಆಸ್ಪತ್ರೆಯ ಬಳಿ ಮಾಡಿರುತ್ತೇನೆ. ನನ್ನ ಜೊತೆ ನಿಪಿ-1 ಕ್ಕೆ ಯಾರು ಸಹಿ ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ.

ಪೊಲೀಸರು ನನ್ನ ಸಮಕ್ಷಮ ಯಾವುದೇ ಮಹಜರನ್ನು ಜರುಗಿಸಿಲ್ಲ ಮತ್ತು ಯಾವುದೇ ವಸ್ತುಗಳನ್ನು ವಶಪಡಿಸಿಕೊಂಡಿರುವುದಿಲ್ಲ.

ಈ ನೋಡುತ್ತಿರುವ ಪೊಟೋದಲ್ಲಿ ನಾನು, ಚಾಸಾ-3 ಮತ್ತು 4 ರವರ ಜೊತೆ ಇದ್ದೆನೆ. ಸದರಿ ಪೊಟೋವನ್ನು ನಿಪಿ-1 ರ ಸಮಯದಲ್ಲಿ ತೆಗೆಯಲಾಗಿದ್ದು, ಯಾವ ವಿಚಾರವಾಗಿ ತೆಗೆಯಲಾಯಿತು ಎಂದು ನನಗೆ ಗೊತ್ತಿಲ್ಲ. ಅದನ್ನು ನಿಪಿ-2 ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿಯು ಮಹಜರಿಗೆ ಪ್ರತಿಕೂಲ ಸಾಕ್ಷ್ಯ ನುಡಿದಿದ್ದರಿಂದ ಮಾನ್ಯ ಸಹಾಯಕರ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು ಕೇಳಿಕೊಂಡಿದ್ದು, ಮಹಜರನ್ನು ನೋಡಲಾಗಿ ಸಾಕ್ಷಿಯು ಮಹಜರಿಗೆ ಪ್ರತಿಕೂಲ ಸಾಕ್ಷಿ ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟಿ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ**

ದಿಃ 23-03-2021 ರಂದು ನನ್ನನ್ನು ಹಾಗೂ ಚಾಸಾ-3 ರವರನ್ನು ಚಾಸಾ-7 ರವರು ಮತ್ತು ಚಾಸಾ-1 ರವರು ನೀಡಿದ ದೂರಿನ ಹಿನ್ನೆಲೆಯಲ್ಲಿ ಪಂಚನಾಮೆಗೆ ಸಹಕರಿಸಲು ಕರೆದುಕೊಂಡು ಹೋಗಿದ್ದರು ಎಂದರೆ ಗೊತ್ತಿಲ್ಲ. ಅವರ ಕೋರಿಕೆ ಮೇರೆಗೆ ನಿಪಿ-1 ನ್ನು ಚಾಸಾ-4

ರವರು ತೋರಿಸಿದ ಸದಳದಲ್ಲಿ ಬೆಳಿಗ್ಗೆ 9.45 ರಿಂದ 10.15 ರವರೆಗೆ ಜರುಗಿಸಿದರು ಎಂದರೆ ಸರಿಯಲ್ಲ, ಸದರಿ ಸಮಯದಲ್ಲಿ ಎರಡೂವರೆ ಅಡಿ ಉದ್ದದ ಒಂದು ಕಬ್ಬಿಣದ ರಾಡನ್ನುವಶಕ್ಕೆ ಪಡೆದರು ಎಂದರೆ ಸರಿಯಲ್ಲ. ಸದರಿ ವಿಚಾರ ನನಗೆ ತಿಳಿಸಿರುತ್ತಾರೆ ಎಂದರೆ ಸರಿಯಲ್ಲ, ನಿಪಿ-1 ರ ಸಮಯಕ್ಕೆ ನಿಪಿ-2 ರಂತೆ ಫೋಟೋ ತೆಗೆದಿರುತ್ತಾರೆ ಎಂದರೆ ಸರಿಯಲ್ಲ.

ಎಲ್ಲಾ ವಿಚಾರ ಗೊತ್ತಿದ್ದರು ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು - ಆರೋಪಿತರ ಪರ ವಕೀಲರಿಂದ – ಇರುವುದಿಲ್ಲ.**

**ಮರು ವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಪರಿಸಲಾಯಿತು.)**

**ಓ.ಹೇ.ಕೇ. ಸರಿ ಇದೆ.**

**02 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್ ಸಿ, ಚನ್ನಗಿರಿ.**